**OS No.15/2022**
**PW-1**

(ದಿನಾಂಕ 19.07.2023 ರಂದು ಸಾಕ್ಷಿಗೆ ಸತ್ಯ ಪ್ರತಿಜ್ಞೆವಿಧಿ ಬೋಧಿಸಲಾಯಿತು).

<u>ಮುಖ್ಯ ವಿಚಾರಣೆ : ವಾದಿ ಪರ ಶ್ರೀ ಎಂ ಎ ಹೆಚ್ ವಕೀಲರಿಂದಃ</u>

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು. ಅದರಲ್ಲಿ ಬರೆದ ಸಂತಿಗಳು ಸತ್ಯವಿರುತ್ತವೆ. ಮುಖ್ಯವಿಚಾರಣೆ ಪ್ರಮಾಣ ಪತ್ರದಲ್ಲಿ ನನ್ನ ಸಹಿ ಇರುತ್ತದೆ. ನನ್ನ ದಾವೆಗೆ ಪೂರಕವಾಗಿ ಕೆಲವೊಂದು ದಾಖಲೆಗಳನ್ನು ಹಾಜರು ಪಡಿಸಿರುತ್ತೇನೆ. ಅವುಗಳನ್ನು ಗುರುತಿಸುವಂತೆ ಕೋರುತ್ತೇನೆ.

1. ಜಮೀನು ಸರ್ವೆ ನಂಬರ 411 ರ 42 ಪಹಣಿ ಪತ್ರಿಕೆಗಳನ್ನು ಹಾಜರಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ 42 ಎಂದು ಗುರುತಿಸಲಾಯಿತು.
2. ಜಮೀನು ಸರ್ವೆ ನಂಬರ 412 ರ 25 ಪಹಣಿ ಪತ್ರಿಕೆಗಳನ್ನು ಹಾಜರಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-43 ರಿಂದ 67 ಎಂದು ಗುರುತಿಸಲಾಯಿತು.
3. ಖರೀದಿ ಪತ್ರದ ದೃಡಿಕೃತ ನಕಲನ್ನು ಹಾಜರಪಡಿಸಿರುತ್ತೇನೆ. ಅದನ್ನು ನಿಪಿ-68 ಎಂದು ಗುರುತಿಸಲಾಯಿತು.
4. ನನ್ನ ತಂದೆಯ ಮರಣ ಪ್ರಮಾಣ ಪತ್ರದ ದೃಡಿಕೃತ ನಕಲನ್ನು ಹಾಜರಪಡಿಸಿರುತ್ತೇನೆ. ಅದನ್ನು ನಿಪಿ-69 ಎಂದು ಗುರುತಿಸಲಾಯಿತು.

ಆದ್ದರಿಂದ ನಾನು ಸಲ್ಲಿಸಿದ ದಾವೆಯನ್ನು ಡಿಕ್ರಿ ಮಾಡುವಂತೆ ಕೋರುತ್ತೇನೆ.

<u>ಪ್ರತಿವಾದಿ ಪರ ಶ್ರೀ ಯಂ. ಕೆ. ವಕೀಲರ ಕೋರಿಕೆಯ ಮೇರೆಗೆ ಪಾಟೀ ಸವಾಲು ಮುಂದೂಡಲಾಯಿತು.</u>

(ನನ್ನ ಉಕ್ತಲೇಖದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿರುತ್ತದೆ.)

**ಓ.ಹೇ.ಕೆ.ಸರಿ ಇದೆ**

ಪ್ರ.ದ.ನ್ಯಾ.ದಂ.ಗಳು, ಮಾನ್ವಿ